12

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕುಶಲಿ ಅಥವಾ ಕುಶಲಿಯಲ್ಲದ ಬಡ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ಜಾತಿ ಮತ್ತು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ವ್ಯಕ್ತಿಗಳಿಗೆ ಸಣ್ಣ ಪ್ರಮಾಣದ ವ್ಯಾಪಾರ ಚಟುವಟಿಕೆಗಳನ್ನು ಕೈಗೊಳ್ಳಲು ಕಿರು ಸಾಲ ಯೋಜನೆ ಜಾರಿಗೆ ತರುವ ಬಗ್ಗೆ.

ಓದಲಾಗಿದೆ:- 1)ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಹಣಕಾಸು ಸಚಿವರ 2007-08ರ ಆಯವ್ಯಯ ಭಾಷಣ.
2)ಸಚಿವ ಸಂಪುಟದ ದಿ:9-2-2007ರ ನಿರ್ಣಯ.

**ಪ್ರಸ್ತಾವನೆ:-**

ಕರ್ನಾಟಕ ಸರ್ಕಾರದ 2007-08 ನೇ ಸಾಲಿನ ಆಯವ್ಯಯದಲ್ಲಿ ದುರ್ಬಲ ವರ್ಗಗಳ ಆರ್ಥಿಕ ಸುಧಾರಣೆಗಾಗಿ ಕಿರು ಸಾಲ ಯೋಜನೆ (Micro Credit) ಎನ್ನುವ ನೂತನ ಯೋಜನೆಯನ್ನು ಘೋಷಿಸಲಾಗಿದೆ. ಈ ಯೋಜನೆಯಡಿ ಗ್ರಾಮೀಣ, ಅರೆ ನಗರ ಮತ್ತು ನಗರ ಪ್ರದೇಶಗಳಿಗೆ ಸೇರಿದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ಜಾತಿ ಮತ್ತು ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ಕುಶಲಿ ಅಥವಾ ಕೌಶಲಿಯಲ್ಲದ ವ್ಯಕ್ತಿಗಳಿಗೆ ಸಣ್ಣ ಪ್ರಮಾಣದ ವ್ಯಾಪಾರ ಚಟುವಟಿಕೆಗಳನ್ನು ಕೈಗೊಳ್ಳಲು ಧನ ಸಹಾಯ ನೀಡಲಾಗುವುದು ಎಂದು ಘೋಷಿಸಲಾಗಿದೆ ಹಾಗೂ ಈ ಉದ್ದೇಶಕ್ಕಾಗಿ 10 ಕೋಟಿ ರೂ.ಗಳನ್ನು ನೀಡಲು ಉದ್ದೇಶಿಸಲಾಗಿದೆ.

ಮೇಲೆ 2) .ರಲ್ಲಿ ಓದಲಾದ ನಿರ್ಣಯದನ್ವಯ ರಾಜ್ಯ ಸಚಿವ ಸಂಪುಟ ದಿ:9-2-2007 ರಂದು ಸ್ವಯಂ ಉದ್ಯೋಗದಡಿ ಸಣ್ಣ ಪ್ರಮಾಣದ ಆರ್ಥಿಕ ಸಾಲದ ಯೋಜನೆಗೆ (Micro Credit) ತಾತ್ವಿಕವಾಗಿ ತನ್ನ ಅನುಮೋದನೆ ನೀಡಿರುತ್ತದೆ. ಸದರಿ ಯೋಜನೆಯಡಿಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಫಲಾನುಭವಿಗಳಿಗೆ ಕಿರು ಸಾಲವನ್ನು ಮಂಜೂರು ಮಾಡಲು ಅವಕಾಶವಿರುತ್ತದೆ. i) ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ii) ಕರ್ನಾಟಕ ಪರಿಶಿಷ್ಟ ಪಂಗಡದ ಅಭಿವೃದ್ಧಿ ನಿಗಮ ನಿಯಮಿತ iii) ಡಾ: ಡಿ.ದೇವರಾಜ್ ಅರಸ್ ಅಭಿವೃದ್ಧಿ ನಿಗಮ ನಿಯಮಿತ iv) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಈ ನಾಲ್ಕು ಸಂಸ್ಥೆಗಳ ಮುಖಾಂತರ ಆಯವ್ಯಯದಲ್ಲಿ ಒದಗಿಸಲಾದ ಅನುದಾನ ಲಭ್ಯತೆ ಮೇರೆಗೆ ಈ ಯೋಜನೆಯನ್ನು 2007-08ನೇ ವರ್ಷದಲ್ಲಿ ಜಾರಿಗೆ ತರಲಾಗುವುದು.

ಆದ್ದರಿಂದ ಈ ಆದೇಶ.

<u>ಸರ್ಕಾರಿ ಆದೇಶ ಸಂ: ಸಕಇ 96 ಎಸ್‌ಡಿಸಿ 2006, ಬೆಂಗಳೂರು ದಿ:14-5-2007</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಸಂದರ್ಭಗಳ ಹಿನ್ನೆಲೆಯಲ್ಲಿ ಗ್ರಾಮೀಣ, ಅರೆ ನಗರ ಮತ್ತು ನಗರ ಪ್ರದೇಶಗಳಿಗೆ ಸೇರಿದ ಬಡ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ಜಾತಿ ಮತ್ತು ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ಕುಶಲಿ ಅಥವಾ ಕುಶಲಿಯಲ್ಲದ ವ್ಯಕ್ತಿಗಳ ಅಭಿವೃದ್ಧಿಗಾಗಿ ಅವರು ಸಣ್ಣ ಪ್ರಮಾಣದ ವ್ಯಾಪಾರ ಚಟುವಟಿಕೆಗಳನ್ನು ಕೈಗೊಳ್ಳಲು 2007-08ನೇ ಸಾಲಿನಿಂದ ಕಿರು ಸಾಲ (Micro Credit) ಯೋಜನೆಯನ್ನು ಈ ಕೆಳಕಂಡ ನಿಗಮಗಳ ಮುಖಾಂತರ ಆಯವ್ಯಯದಲ್ಲಿ ಒದಗಿಸಲಾದ ಅನುದಾನ ಲಭ್ಯತೆ ಮೇರೆಗೆ ಅನುಷ್ಠಾನಗೊಳಿಸಲು ಸರ್ಕಾರವು ಆದೇಶಿಸಿದೆ.

1) ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ
2) ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ
3) ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ
4) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದಧಿ ನಿಗಮ ನಿಯಮಿತ

ಕಿರು ಸಾಲ ಯೋಜನೆಯನ್ನು ಈ ಕೆಳಕಂಡಂತೆ ಕಾರ್ಯಗತಗೊಳಿಸಲು ಆದೇಶಿಸಿದೆ.

1) ನಿಗಮವು ಫಲಾಪೇಕ್ಷಿಗಳ ಸ್ವ-ಸಹಾಯ ಗುಂಪುಗಳನ್ನು ಇತರೆ ಇಲಾಖೆಗಳು ಹಾಗೂ ಸರ್ಕಾರೇತರ ಸಂಸ್ಥೆಗಳ ಮೂಲಕ ಸಂಘಟನೆ ಮಾಡಿ ಸ್ವ-ಸಹಾಯ ಗುಂಪುಗಳ ಮೂಲಕ ಒಂದು ಯೋಜನೆಯನ್ನು ಸಿದ್ಧಪಡಿಸಿ ಅನುಷ್ಠಾನಗೊಳಿಸಬಹುದಾಗಿದೆ. ಸ್ವ-ಸಹಾಯ ಗುಂಪಿನ ಸದಸ್ಯರಾಗಿರುವ ಫಲಾನುಭವಿ ಜಮೀನು ಹೊಂದಿದ್ದಲ್ಲಿ ಅಥವಾ ಸರ್ಕಾರಿ/ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಉದ್ಯೋಗದಲ್ಲಿದ್ದಲ್ಲಿ ಅವರಿಗೆ ಸಣ್ಣ ಪ್ರಮಾಣದ ಆರ್ಥಿಕ ಸಾಲ ಯೋಜನೆಯಡಿಯಲ್ಲಿ ಸಾಲ ಮಂಜೂರು ಮಾಡತಕ್ಕದ್ದಲ್ಲ. ಮೈಕ್ರೋ ಕ್ರೆಡಿಟ್ ಹಣಕಾಸು ಯೋಜನೆಯಡಿ ಮತ್ತು ಸ್ವಯಂ ಉದ್ಯೋಗ ಯೋಜನೆಯಡಿ **<u>ಶೇ.50 ರಷ್ಟು ಸಹಾಯಧನ, ಗರಿಷ್ಠ ರೂ.2,500-00 ಗಳು</u>** <u>ಪ್ರತಿ ಫಲಾನುಭವಿಗೆ</u> ಫಲಾನುಭವಿಯ ಹೆಸರಿನಲ್ಲಿ ಮಂಜೂರು ಮಾಡಿ ಸಾಲವನ್ನು ಸ್ವ-ಸಹಾಯ ಗುಂಪುಗಳಿಗೆ ನೀಡುವುದು. ಬ್ಯಾಂಕಿನಲ್ಲಿ ಒಂದು ಖಾತೆಯನ್ನು ತೆರೆದು ಸದರಿ ಉದ್ದೇಶಕ್ಕಾಗಿ ನೀಡಿದ ಅಕೌಂಟ್ ಪೇಯಿ ಚೆಕ್ಕುಗಳನ್ನು ಬ್ಯಾಂಕು ಖಾತೆಗೆ ಜಮಾ ಮಾಡಬಹುದಾಗಿದೆ. ಸ್ವ-ಸಹಾಯ ಸಂಘಗಳು ಸಾಲವನ್ನು ಫಲಾನುಭವಿಗೆ ಶೇ.3ರ ಬಡ್ಡಿ ದರದಲ್ಲಿ ನೀಡಬೇಕು.

ii) ಸ್ವ-ಸಹಾಯ ಸಂಘಗಳು ಸಾಲದ ಮೊತ್ತವನ್ನು ವಾರ್ಷಿಕ ಶೇ.4 ರ ಬಡ್ಡಿಯೊಂದಿಗೆ ನಿಗಮಕ್ಕೆ ಹಿಂದಿರುಗಿಸಬೇಕಾಗುತ್ತದೆ. ಶೇ.01 ಭಾಗ ಬಡ್ಡಿಯನ್ನು ಸ್ವ-ಸಹಾಯ ಸಂಘಗಳು ಮತ್ತು ಸರ್ಕಾರೇತರ ಸಂಸ್ಥೆಗಳು ಸೇವಾ ಶುಲ್ಕವಾಗಿ ಇಟ್ಟುಕೊಂಡು ಸಂಘಗಳ ಕಾರ್ಯಚಟುವಟಿಕೆಗಳಿಗೆ ಬಳಸಿಕೊಳ್ಳಬಹುದು. ಪ್ರತಿ ಸ್ವ-ಸಹಾಯ ಸಂಘಕ್ಕೆ ನೀಡುವ ಹಣಕಾಸಿನ ನೆರವು ರೂ.2.50 ಲಕ್ಷಕ್ಕೆ ಮೀರಬಾರದು.

iii) ಸ್ವ-ಸಹಾಯ ಗುಂಪುಗಳು ಸಾಲದ ಮೊತ್ತವನ್ನು 36 ತಿಂಗಳಲ್ಲಿ ತ್ರೈಮಾಸಿಕ ಕಂತುಗಳಲ್ಲಿ ಪ್ರತಿ ವರ್ಷ (30th June, 30th Sep. 31st Dec ಹಾಗೂ 31st March ರಲ್ಲಿ) ಸಾಲ ಮರುಪಾವತಿ ಮಾಡಬೇಕು. ನಿಗಮಗಳಿಗೆ ಸಾಲ ಮರುಪಾವತಿ ಮಾಡಲು ಸಾಲ ಮರುಪಾವತಿಗೆ 6 ದಿನಗಳ ರಿಯಾಯಿತಿ ಅವಧಿಯನ್ನು ನೀಡಿ ನಂತರ ಸಾಲ ಮರುಪಾವತಿ ಮಾಡಲು ಸುಸ್ತಿದಾರರಾಗಿದ್ದಲ್ಲಿ ಅಂತಹ ಸಂಸ್ಥೆಗಳು ಶೇ.5 ರಷ್ಟು ದಂಡದಂತೆ ಬಡ್ಡಿ ಹಾಕಬೇಕಾಗುತ್ತದೆ.

iv) ನಿಗಮವು ಸಂಸ್ಥೆಗಳಿಗೆ ಸಾಲ ಮಂಜೂರು ಮಾಡುವ ಬಗ್ಗೆ ಹಾಗೂ ಲೆಕ್ಕ ನಿರ್ವಹಣೆ ಬಗ್ಗೆ ಷರತ್ತು ಮತ್ತು ನಿಬಂಧನೆಗಳ ಬಗ್ಗೆ ಸರ್ಕಾರದ ಪೂರ್ವಾನುಮೋದನೆಯೊಡನೆ ಮಾರ್ಗಸೂಚಿಯನ್ನು ನೀಡಲು ಮುಕ್ತವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಕೆ.ಎಸ್.ವೇಣುಗೋಪಾಲ್) 14/2/07
ಸರ್ಕಾರದ ಉಪ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

ಗೆ:-
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರಿಗೆ ಈ ಆದೇಶವನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಮತ್ತು ಪ್ರಕಟಿತ 200 ಪ್ರತಿಗಳನ್ನು ಕಳುಹಿಸಲು ಕೋರಿ ಕಳುಹಿಸಿದೆ.

ಪ್ರತಿಯನ್ನು:-

1) ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2) ಉಪ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು

3) ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು

4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು

5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು

6) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು

7) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬೆಂಗಳೂರು

8) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು

9) ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ್ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು

10) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು

11) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು

12) ಸಚಿವ ಸಂಪುಟ ಶಾಖೆ (ಪ್ರಕರಣ ಸಂ: ಸಿ.59/2007), 3ನೇ ಮಹಡಿ, ವಿಧಾನಸೌಧ, ಬೆಂಗಳೂರು

13) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 & 9), 2ನೇ ಮಹಡಿ, ವಿಧಾನಸೌಧ, ಬೆಂಗಳೂರು

14) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು

15) ಸರ್ಕಾರದ ಉಪ ಕಾರ್ಯದರ್ಶಿಗಳು-2 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು

16) ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು

17) ವಾರದ ರಾಜ್ಯ ಪತ್ರ

18) ಬಿಡಿ ಪ್ರತಿ